	ಪರಿಶಿಷ್ಟ ಜಾತಿ	ಪರಿಶಿಷ್ಟ ವರ್ಗ
ಆಯವ್ಯಯದಲ್ಲಿ ನಿಗದಿಪಡಿಸದ ಗುರಿ –	113	06
ಹೆಚ್ಚುವರಿ ಗುರಿಯಲ್ಲಿ ಮಂಜೂರಾದ –	–	10
ಕೊಳವೆ ಬಾವಿಗಳ ಸಂಖ್ಯೆ		
ಒಟ್ಟು	**113**	**16**

ಮೇಲ್ಕಾಣಿಸಿದಂತೆ ಪರಿಶಿಷ್ಟ ಜಾತಿಗೆ 113 ಮತ್ತು ಪರಿಶಿಷ್ಟ ವರ್ಗಕ್ಕೆ 16 ಒಟ್ಟು 129 ಕೊಳವೆಬಾವಿಗಳನ್ನು 2005-06ನೇ ಸಾಲಿನಲ್ಲಿ ಕೊರೆದು ಪೂರ್ಣಗೊಳಿಸಲಾಗಿದೆ

2006-07ನೇ ಸಾಲಿನಲ್ಲಿ ಆಯವ್ಯಯದಲ್ಲಿ ನಿಗದಿ ಪಡಿಸಿದ ಪರಿಶಿಷ್ಟ ಜಾತಿಗೆ 105 ಮತ್ತು ಪರಿಶಿಷ್ಟ ವರ್ಗಕ್ಕೆ 12 ಕೊಳವೆ ಬಾವಿಗಳನ್ನು ಕೊರೆಯಲು ಈಗಾಗಲೇ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿದ್ದು, ಅದರಂತೆ ಕಾರ್ಯಪ್ರಗತಿಯಲ್ಲಿದೆ

ಆ) ದಿನಾಂಕ 31-03-07ಕ್ಕೆ ಅಂತ್ಯಗೊಳ್ಳಲಿರುವ ಆರ್ಥಿಕ ಸಾಲಿನಲ್ಲಿ ಎಲ್ಲಾ ಕೊಳವೆಬಾವಿಗಳನ್ನು ಕೊರೆದು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿದ್ದು ಅದರಂತೆ ಈ ಯೋಜನೆಯ ಬಗ್ಗೆ ಹೆಚ್ಚಿನ ಆದ್ಯತೆ ನೀಡಿ ಕೊಳವೆಬಾವಿಗಳನ್ನು ಕೊರೆದು ಪೂರ್ಣಗೊಳಿಸಲು ಜಿಲ್ಲಾ ವ್ಯವಸ್ಥಾಪಕರಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ

ಇ) ಕೊಳವೆಬಾವಿ ಕೊರೆಯುವ ಕಾರ್ಯ ಪ್ರಗತಿಯಲ್ಲಿದ್ದು, ದಿನಾಂಕ 31-03-2007 ರೊಳಗೆ ಆರ್ಥಿಕ ವರ್ಷದಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ

660 (475) ಶ್ರೀ ವಿನಯ ಕುಲಕರ್ಣಿ (ಧಾರವಾಡ ಗ್ರಾಮೀಣ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಗ್ರಾಮೀಣ ಮತ ಕ್ಷೇತ್ರದಲ್ಲಿ ಮತ್ತು ಧಾರವಾಡ ಜಿಲ್ಲೆಯಲ್ಲಿ ಸ್ಥಳೀಯ ಜಾನುವಾರುಗಳ ತಳಿಗಳ ಅಭಿವೃದ್ಧಿ ಕಡೆಗೆ ಅಧಿಕಾರಿಗಳು ನಿರ್ಲಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಸ್ಥಳೀಯ ಜಾನುವಾರುಗಳ ಅಭಿವೃದ್ಧಿಪಡಿಸುವ ಯೋಜನೆ ಏನಾದರೂ ಸರ್ಕಾರಕ್ಕೆ ಇದೆಯೆ?

ಇ) ಸ್ಥಳೀಯ ತಳಿಗಳ ಬದಲಾಗಿ ಮುರ್ರಾ ತಳಿಗಳಂತಹವು ಹೆಚ್ಚಾಗಿ ಕಂಡುಬರುತ್ತಿದ್ದು ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು?

ಈ) ಧಾರವಾಡ ಗ್ರಾಮೀಣ ಮತಕ್ಷೇತ್ರದಲ್ಲಿ ಸಿಬ್ಬಂದಿ ಕೊರತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಉ) ಹಾಗಿದ್ದಲ್ಲಿ ಸಿಬ್ಬಂದಿ ಕೊರತೆಯನ್ನು ಯಾವಾಗ ಪೂರ್ಣಗೊಳಿಸ ಲಾಗುವುದು?

ಊ) ಧಾರವಾಡ ಗ್ರಾಮೀಣ ಮತಕ್ಷೇತ್ರದಲ್ಲಿ 6–7 ಕಿಲೋಮೀಟರ್ ವ್ಯಾಪ್ತಿಗೆ ಒಂದು ಪಶು ಆಸ್ಪತ್ರೆಯನ್ನು ಪ್ರಾರಂಭಿಸಿದರೆ ಇಲ್ಲಿನ ರೈತರಿಗೆ ತುಂಬಾ ಅನುಕೂಲವಾಗುವುದಿಲ್ಲವೆ?

ಋ) ಹೊಸದಾಗಿ ಆಸ್ಪತ್ರೆಗಳನ್ನು ತೆರೆಯುವ ಯೋಜನೆ ಏನಾದರೂ ಸರ್ಕಾರಕ್ಕೆ ಇದೆಯೆ? ಇದ್ದಲ್ಲಿ ಅದು ಯಾವಾಗ?

ಎ) ಧಾರವಾಡ ಗ್ರಾಮೀಣ ಮತಕ್ಷೇತ್ರದಲ್ಲಿ ಪಶು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಈಗಾಗಲೇ ನಾನು ಹಲವು ಬಾರಿ ವಿನಂತಿಸಿದ್ದರೂ ಏನು ಪರಿಣಾಮ ಕಂಡುಬಂದಿರುವುದಿಲ್ಲ ಇದಕ್ಕೆ ಸರ್ಕಾರದ ನಿಲುವೇನು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಇಲಾಖೆ ಕಾರ್ಯಕ್ರಮಗಳಲ್ಲಿ ಒಂದಾದ ತಳಿ ಅಭಿವೃದ್ಧಿಯನ್ನು ಕೃತಕ ಗರ್ಭಧಾರಣೆ ಮುಖಾಂತರ ನಿರ್ವಹಿಸಲಾಗುತ್ತಿದೆ ಧಾರವಾಡ ಗ್ರಾಮೀಣ ಮತ ಕ್ಷೇತ್ರದಲ್ಲಿರುವ ಎಲ್ಲ ಪಶುವೈದ್ಯ ಸಂಸ್ಥೆಗಳಲ್ಲಿ ಸ್ಥಳೀಯ ಗೋತಳಿಯಾದ ಖಿಲಾರ ತಳಿಯ ವೀರ್ಯ ನಳಿಕೆಗಳನ್ನು ಸಹ ಕೃತಕ ಗರ್ಭಧಾರಣೆಗೆ ಉಪಯೋಗಿಸಲು ಸರಬರಾಜು ಮಾಡಿ ತಳಿ ಅಭಿವೃದ್ಧಿ ಕ್ರಮವಹಿಸಲಾಗಿದೆ ಆದ್ದರಿಂದ ಸ್ಥಳೀಯ ಗೋತಳಿ ಅಭಿವೃದ್ಧಿಗೆ ನಿರ್ಲಕ್ಷತೆ ಮಾಡಲಾಗುತ್ತಿಲ್ಲ

ಆ) ಇದೆ ಕರ್ನಾಟಕ ಪ್ರಸಿದ್ಧ ಸ್ಥಳೀಯ ಗೋತಳಿಗಳಾದ ಹಳ್ಳಿಕಾರ್, ಅಮೃತ ಮಹಲ್, ಖಿಲಾರ, ದೇವಣಿ ಕೃಷ್ಣವ್ಯಾಲಿ ತಳಿಗಳು ಅಭಿವೃದ್ಧಿಗಾಗಿ ಸುವರ್ಣ ಕರ್ನಾಟಕ ಗೋತಳಿ ಅಭಿವೃದ್ಧಿ ಯೋಜನೆ ಕಾರ್ಯಕ್ರಮ 2006–07ನೇ ಸಾಲಿನಿಂದ ಅನುಷ್ಠಾನಗೊಳಿಸಲು, ಈ ಯೋಜನೆಗೆ ರೂ 270 00 ಲಕ್ಷಗಳ ಅನುದಾನವನ್ನು ಪ್ರತಿ ಜಿಲ್ಲೆಗೆ ರೂ 10 00 ಲಕ್ಷಗಳಂತೆ ಹಂಚಲಾಗಿದೆ

ಇ) ಮುರ್ರಾ ಮತ್ತು ಸೂರ್ತಿ ತಳಿಗಳು ಎಮ್ಮೆ ತಳಿಗಳಾಗಿದ್ದು ರಾಜ್ಯದಲ್ಲಿ ಹೈನುಗಾರಿಕೆಗಾಗಿ ಎಮ್ಮೆಗಳಲ್ಲಿ ಈ ತಳಿಗಳನ್ನು ಸಾಕಲಾಗುತ್ತಿದೆ ಈ ಹಿನ್ನೆಲೆಯಲ್ಲಿ ಧಾರವಾಡ ತೇಗೂರು ಎಮ್ಮೆ ತಳಿ ಅಭಿವೃದ್ಧಿ ಕೇಂದ್ರದಲ್ಲಿ ಮುರ್ರಾ ತಳಿ ಮಾತ್ರ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗಿದೆ ಗ್ರಾಮೀಣ ಪ್ರದೇಶದಲ್ಲಿ ಈ ಮುರ್ರಾ ತಳಿ ಹೈನುಗಾರಿಕೆಗೆ ಅತ್ಯುಪಯುಕ್ತವಾಗಿವೆ

ಈ) ಧಾರವಾಡ ಗ್ರಾಮೀಣ ಮತ ಕ್ಷೇತ್ರದಲ್ಲಿ 2 ಪಶುವೈದ್ಯಾಧಿಕಾರಿಗಳು, 2 ಪಶುವೈದ್ಯಕೀಯ ಸಹಾಯಕರು ಮತ್ತು 2 ಡಿ ದರ್ಜೆ ಹುದ್ದೆಗಳು ಮಾತ್ರ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ

ಉ) ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕೆಳಕಂಡಂತೆ ಕ್ರಮ ತೆಗೆದುಕೊಳ್ಳಲಾಗುತ್ತಿದ್ದು, ಧಾರವಾಡ ಗ್ರಾಮೀಣ ಕ್ಷೇತ್ರದ ಖಾಲಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲಾಗುವುದು

ಶೇಕಡಾ 90ರಷ್ಟು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುವುದು ಶೇ 10% ರಷ್ಟು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾಗಿದ್ದು 4 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಕ್ರಮ ಇದ್ದು, ಪ್ರಸ್ತುತ ಕರ್ನಾಟಕ ಲೋಕ ಸೇವಾ ಆಯೋಗದಿಂದ 41 ಪಶುವೈದ್ಯಾಧಿಕಾರಿಗಳ ನೇಮಕಾತಿಗೆ ಸಂದರ್ಶನ ಮುಗಿದಿದ್ದು, ನೇಮಕಾತಿ ಆದೇಶ ನೀಡಬೇಕಾಗಿದೆ ಮತ್ತೆ 77 ಪಶು ವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ವಿಶೇಷ ನೇಮಕಾತಿ ನಿಯಮ 2003ರ ಅಡಿ 577 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಬೇಕಾಗಿದ್ದು, ಇದುವರೆಗೆ 383 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದ್ದು, ಉಳಿಕೆ 194 ಪಶುವೈದ್ಯಾಧಿಕಾರಿಗಳ ನೇಮಕಾತಿ ಮಾಡಲು ಪ್ರಸ್ತಾವನೆ ಸಹ ಪರಿಶೀಲನೆಯಲ್ಲಿದೆ ಪಶುವೈದ್ಯಕೀಯ ಮೇಲ್ವಿಚಾರಕರು ಮತ್ತು ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಹುದ್ದೆಯನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುತ್ತದೆ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಇಲಾಖೆಯಲ್ಲಿನ ಎಸ್ ಎಸ್ ಎಲ್ ಸಿ ಪಾಸಾದ ಡಿ

ದರ್ಜೆ ನೌಕರರಿಗೆ ತರಬೇತಿ ನೀಡಿ ಬಡ್ತಿ ಮುಖೇನ ತುಂಬಲು ಕ್ರಮವಹಿಸಿದ್ದು ಈಗಾಗಲೇ 244 ಡಿ ದರ್ಜೆ ನೌಕರರಿಗೆ ತರಬೇತಿ ನೀಡಲಾಗಿದೆ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪರೀಕ್ಷೆ ಮಂಡಳಿಯ ಪರಿಶೀಲನೆಗೆ ಕಳುಹಿಸಿದ್ದು ವರದಿ ಬಂದ ಕೂಡಲೇ ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದು 300 ಡಿ ದರ್ಜೆ ನೌಕರರ ಹುದ್ದೆಗಳನ್ನು ಔಟ್ ಸೋರ್ಸ್ ಮುಖೇನ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ

ಊ) ರಾಷ್ಟ್ರೀಯ ಕೃಷಿ ಆಯೋಗದ 1984ರ ಮಾನದಂಡಗಳ ಪ್ರಕಾರ, ಪ್ರತಿ 5000 ಜಾನುವಾರು ಘಟಕಗಳಿಗೆ ಪಶುವೈದ್ಯಾಧಿಕಾರಿಗಳಿರುವ ಒಂದು ಪಶುವೈದ್ಯ ಸಂಸ್ಥೆ ಇರಬೇಕಾಗುತ್ತದೆ ಧಾರವಾಡ ಮತ ಕ್ಷೇತ್ರದಲ್ಲಿ 96342 ಜಾನುವಾರು ಘಟಕಗಳಿದ್ದು 19 ಪಶುವೈದ್ಯ ಸಂಸ್ಥೆಗಳೂ ಇರಬೇಕಿತ್ತು ಆದರೆ ಈಗಾಗಲೇ ಧಾರವಾಡ ಮತ ಕ್ಷೇತ್ರದಲ್ಲಿ 29 ಪಶುವೈದ್ಯ ಸಂಸ್ಥೆಗಳಿವೆ ಈ ಹಿನ್ನೆಲೆಯಲ್ಲಿ ಮತ್ತು ಧಾರವಾಡ ತಾಲ್ಲೂಕು ಡಾ ಡಿ ಎಂ ನಂಜುಂಡಪ್ಪ ಇವರ ಪ್ರಾದೇಶಿಕ ಅಸಮತೋಲನಾ ನಿವಾರಣಾ ವರದಿಯ ಮೇರೆಗೆ ಮುಂದುವರಿದ ತಾಲ್ಲೂಕು ಆಗಿದ್ದು, ಪಶು ಚಿಕಿತ್ಸಾಲಯ ಕೊರತೆ ಇರದ ಪ್ರಯುಕ್ತ ಹೊಸದಾಗಿ ಪ್ರಾರಂಭಿಸಲು ಅವಕಾಶವಿರುವುದಿಲ್ಲ

ಋ) ಡಾ ಡಿ ಎಂ ನಂಜುಂಡಪ್ಪ ಇವರ ಪ್ರಾದೇಶಿಕ ಅಸಮತೋಲನಾ ನಿವಾರಣಾ ವರದಿಯಂತೆ ಯಾವ ತಾಲ್ಲೂಕುಗಳಲ್ಲಿ ಪಶು ಚಿಕಿತ್ಸಾಲಯ ಪ್ರತಿ 5000 ಜಾನುವಾರು ಘಟಕಗಳಿಗೆ ಒಂದರಂತೆ ಇಲ್ಲವೊ ಆ ತಾಲ್ಲೂಕುಗಳು ಪ್ರಥಮ ಆದ್ಯತೆ ಮೇಲೆ ಹೊಸ ಪಶು ಚಿಕಿತ್ಸಾಲಯಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ ಕೊರತೆ ಇರುವ ಆ ತಾಲ್ಲೂಕುಗಳಲ್ಲಿ ಮಾತ್ರ ಆದ್ಯತೆ ಮೇರೆಗೆ 8 ವರ್ಷಗಳ ಅವಧಿಯಲ್ಲಿ ತೆರೆಯುವ ಕಾರ್ಯಕ್ರಮ ಸರ್ಕಾರದಲ್ಲಿದೆ

ಎ) ಧಾರವಾಡ ಮತ ಕ್ಷೇತ್ರಗಳನ್ನೊಳಗೊಂಡಂತೆ ರಾಜ್ಯದ ಎಲ್ಲ ಜಿಲ್ಲೆಗಳಿಗೂ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ/ಕೃತಕ ಗರ್ಭಧಾರಣಾ ಕೇಂದ್ರಗಳು, ಪಶು ಚಿಕಿತ್ಸಾಲಯಗಳನ್ನಾಗಿ ಮತ್ತು ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇಲಾಖೆಯಲ್ಲಿ ಸರ್ಕಾರದ ಪರಿಶೀಲನೆಯಲ್ಲಿದೆ ಇದಕ್ಕೆ ಯಾವುದೇ ಕಾಲಮಿತಿ ನಿಗದಿಪಡಿಸಲಾಗಿರುವುದಿಲ್ಲ

* * * * *

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು ಪಿ–5